# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 221(288) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಏರೋಸ್ಪೇಸ್ ಪಾರ್ಕ್‌ನ್ನು ನಿರ್ಮಾಣ ಮಾಡಲು ರಾಜ್ಯದ ಯಾವ ಯಾವ ಜಿಲ್ಲೆಗಳಿಂದ ಪ್ರಸ್ತಾವನೆಗಳು ಬಂದಿವೆ; | ಬೆಂಗಳೂರು ಜಿಲ್ಲೆಯ ಹೈಟೆಕ್, ಡಿಫೆನ್ಸ್ & ಏರೋಸ್ಪೇಸ್ ಪಾರ್ಕ್ 1ನೇ ಹಂತ ಕೈಗಾರಿಕಾ ಪ್ರದೇಶದಲ್ಲಿ ಏರೋಸ್ಪೇಸ್ ಪಾರ್ಕ್ ಮತ್ತು ಏರೋಸ್ಪೇಸ್ ಎಸ್.ಇ.ಜೆಡ್. ಎಂದು ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದೆ.<br>ಅಲ್ಲದೇ, ದೇವನಹಳ್ಳಿ ತಾಲ್ಲೂಕಿನ ಹರಳೂರು-ಮುದ್ದೇನಹಳ್ಳಿ ಗ್ರಾಮಗಳಲ್ಲಿ ಹೈಟೆಕ್, ಡಿಫೆನ್ಸ್ & ಏರೋಸ್ಪೇಸ್ ಪಾರ್ಕ್ 2ನೇ ಹಂತ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದೆ.<br>ಅಲ್ಲದೇ, ಕರ್ನಾಟಕ ಏರೋಸ್ಪೇಸ್ & ಡಿಫೆನ್ಸ್ ಪಾಲಿಸಿ, 2025-27 ರಲ್ಲಿ ಬೆಂಗಳೂರು, ಬೆಳಗಾವಿ, ಮೈಸೂರು, ತುಮಕೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಏರೋಸ್ಪೇಸ್ ಪಾರ್ಕ್ ಗಳನ್ನು ಅಭಿವೃದ್ಧಿ ಪಡಿಸಲಾಗುವುದೆಂದು ಘೋಷಿಸಲಾಗಿದೆ. |
| ಆ) | ದೇವನಹಳ್ಳಿ ವ್ಯಾಪ್ತಿಯಲ್ಲಿ ಏರೋಸ್ಪೇಸ್ ಪಾರ್ಕ್ ನ್ನು ನಿರ್ಮಿಸಲು ಉದ್ದೇಶಿಸಿರುವ ಭೂಮಿಯನ್ನು ಸರ್ಕಾರ ಕೈ ಬಿಟ್ಟಿರುವುದರಿಂದ ಇದಕ್ಕೆ ಪರ್ಯಾಯವಾಗಿ ರಾಜ್ಯದ ಯಾವ ಜಾಗವನ್ನು ಗುರುತಿಸಲಾಗಿದೆ; | |
| ಇ) | ಏರೋಸ್ಪೇಸ್ ಪಾರ್ಕ್ ಸ್ಥಾಪನೆಗೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳನ್ನು ಕೂಡ ಪರಿಗಣಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳನ್ನು ಪರಿಗಣಿಸದಿರಲು ಕಾರಣವೇನು; | ಕಲ್ಯಾಣ ಕರ್ನಾಟಕ ಭಾಗದಲ್ಲಿ ಮಂಡಳಿ ಅಭಿವೃದ್ಧಿಪಡಿಸುತ್ತಿರುವ ಕೈಗಾರಿಕಾ ಪ್ರದೇಶಗಳಲ್ಲಿ ಏರೋಸ್ಪೇಸ್ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಯೋಜನೆಗಳನ್ನು ಸ್ಥಾಪಿಸಲು ಕೈಗಾರಿಕೆಗಳು ಮುಂದೆ ಬಂದಲ್ಲಿ ಅವರಿಗೆ ಜಮೀನು ಹಂಚಿಕೆಗೆ ನಿಯಮಾನುಸಾರ ಕ್ರಮವಹಿಸಲಾಗುತ್ತದೆ.<br>ಮುಂದುವರೆದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಏರೋಸ್ಪೇಸ್ ಪಾರ್ಕ್ ಸ್ಥಾಪಿಸಲು ಕೈಗಾರಿಕೆಗಳಿಂದ ಬೇಡಿಕೆ ಬಂದಲ್ಲಿ ಈ ಬಗ್ಗೆ ಪರಿಗಣಿಸಲಾಗುತ್ತದೆ. |
| ಈ) | ಕಲ್ಯಾಣ ಕರ್ನಾಟಕ ಭಾಗವು ಈಗಾಗಲೇ ಹಿಂದುಳಿದ ಪ್ರದೇಶವಾಗಿರುವುದರಿಂದ ಮತ್ತು ಈ ಭಾಗದಲ್ಲಿ ಕೆ.ಐ.ಎ.ಡಿ.ಬಿ. ಅಧೀನದ ಹೆಚ್ಚಿನ ಆಸ್ತಿ ಇದ್ದು ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಗೆ ಒತ್ತು ನೀಡುವ ಉದ್ದೇಶದಿಂದ ಏರೋಸ್ಪೇಸ್ ಪಾರ್ಕ್ ನ್ನು ಈ ಭಾಗದಲ್ಲಿ ನಿರ್ಮಿಸಬಹುದಲ್ಲವೇ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; | |
| ಉ) | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪ್ರಸ್ತುತ ಕೆಐಎಡಿಬಿ ಅಧೀನದಲ್ಲಿರುವ ಒಟ್ಟು ಭೂಮಿಯ ಪ್ರಮಾಣ ಎಷ್ಟು? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಮಂಡಳಿಯು 12164.82 ಎಕರೆ ಜಮೀನಿನಲ್ಲಿ 35 ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿರುತ್ತದೆ. ಜಿಲ್ಲಾವಾರು ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |

**ಸಂಖ್ಯೆ: ಸಿಐ 417 ಐಎಪಿ 2025**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ**
**ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**

ಅನುಬಂಧ -1

# ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಭೂಸ್ವಾಧೀನಪಡಿಸಿ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳ ವಿವರಗಳು

| ಕ್ರ.ಸಂ. | ಜಿಲ್ಲೆ ಹೆಸರು | ಭೂಸ್ವಾಧೀನಪಡಿಸಿ ಅಭಿವೃದ್ಧಿಪಡಿಸಿರುವ ವಿಸ್ತೀರ್ಣ (ಎಕರೆಗಳಲ್ಲಿ) | ಒಟ್ಟು ಕೈಗಾರಿಕಾ ಪ್ರದೇಶಗಳು |
|---|---|---|---|
| 1 | ಬಳ್ಳಾರಿ | 2403.00 | 9 |
| 2 | ಬೀದರ್ | 2257.75 | 8 |
| 3 | ಕಲಬುರ್ಗಿ | 1937.53 | 6 |
| 4 | ರಾಯಚೂರ್ | 2217.11 | 6 |
| 5 | ಕೊಪ್ಪಳ | 371.79 | 3 |
| 6 | ಯಾದಗಿರಿ | 2977.64 | 3 |
| | ಒಟ್ಟು | 12164.82 | 35 |

Secretary-I
Karnataka Industrial Areas Development Board
Bengaluru-560 001.

Secretary-II
Karnataka Industrial Areas Development Board,
Bengaluru-560 001